ಉತ್ತರಿಸುವ ಸಚಿವರು: ಶ್ರೀ ಮಲ್ಲಿಕಾರ್ಜುನ ಖರ್ಗೆ(ಗೃಹ ಸಚಿವರು)

ಉತ್ತರ

1) ಹೌದು.

2) ಗೋಕುಲ ಗ್ರಾಮದ ರಿ.ಸ.ಸಂ.358ರಲ್ಲಿನ 11 ಎಕರೆ 4 ಗುಂಟೆ ಜಮೀನನ್ನು ಪೋಲೀಸ್ ಗ್ರೌಂಡನ್ನು ನಿರ್ಮಾಣ ಮಾಡಲು ಆಯ್ಕೆ ಮಾಡಲಾಗಿದೆ.

3) ನಿವೇಶನ ನೀಡುವಂತೆ ಜಿಲ್ಲಾಧಿಕಾರಿ ಧಾರವಾಡರವರನ್ನು ಕೋರಲಾಗಿದೆ. ನಿವೇಶನ ಇಲಾಖೆಗೆ ಲಭ್ಯವಾದ ನಂತರ ಅಂದಾಜು ಪಟ್ಟಿ ತಯಾರಿಸಲಾಗುವುದು.

4) ಉದ್ಭವಿಸುವುದಿಲ್ಲ

ಹುಬ್ಬಳ್ಳಿ-ಧಾರವಾಡ ನಗರಗಳಲ್ಲಿ ಅನಧಿಕೃತ ಬಡಾವಣೆಗಳು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 943(1057)

ಸದಸ್ಯರ ಹೆಸರು: ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯುಂ ಖಾನ್(ಕುಬ್ಬಳ್ಳಿ)

ಪ್ರಶ್ನೆ

ಅ) ಹುಬ್ಬಳ್ಳಿ-ಧಾರವಾಡ ನಗರಗಳಲ್ಲಿ ಎಷ್ಟು ಅನಧಿಕೃತ ಬಡಾವಣೆಗಳಿರುತ್ತವೆ?

ಆ) ಈ ಅನಧಿಕೃತ ಬಡಾವಣೆಗಳಲ್ಲಿ ನಾಗರೀಕ ಸೌಲಭ್ಯ ಅಂದರೆ ನೀರು, ವಿದ್ಯುತ್, ರಸ್ತೆ ಒಳಚರಂಡಿ, ಇತ್ಯಾದಿ ಕಲ್ಪಿಸಲಾಗಿದೆಯೇ?

ಇ) ಈ ಬಡಾವಣೆಗಳಲ್ಲಿ ಏಕೆ ನಾಗರೀಕ ಸೌಲಭ್ಯ ಒದಗಿಸಿರುವುದಿಲ್ಲ ಕಾರಣವೇನು?

ಈ) ಅನಧಿಕೃತ ಬಡಾವಣೆಗಳಲ್ಲಿಯ ಮನೆಗಳು ಸಕ್ರಮಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಉತ್ತರಿಸುವ ಸಚಿವರು: ಶ್ರೀ ಬಿ.ಬಿ.ಚಿಮ್ಮನಕಟ್ಟಿ(ನಗರಾಭಿವೃದ್ಧಿ ಸಚಿವರು)

ಉತ್ತರ

ಅ) ಸುಮಾರು 62.

ಆ ಮತ್ತು ಇ) ಹೌದು. ಸಾಧ್ಯವಾದಷ್ಟು ಮಟ್ಟಕ್ಕೆ ಕಲ್ಪಿಸಲಾಗಿದೆ.

ಈ) ಪರಿಶೀಲನೆಯಲ್ಲಿದೆ.

ಹುಬ್ಬಳ್ಳಿ-ಧಾರವಾಡ ನಗರಗಳಲ್ಲಿ ಕುಡಿಯುವ ನೀರಿನ ಸಮಸ್ಯೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 944(1501)

ಸದಸ್ಯರ ಹೆಸರು: ಶ್ರೀ ಜಗದೀಶ ಶೆಟ್ಟರ್(ಹುಬ್ಬಳ್ಳಿ ಗ್ರಾಮೀಣ)

ಪ್ರಶ್ನೆ

1. ಹುಬ್ಬಳ್ಳಿ-ಧಾರವಾಡ ನಗರಗಳಲ್ಲಿ ಕುಡಿಯುವ ನೀರು ಪೂರೈಕೆಗೆ 2001-02 ಸಾಲಿನಲ್ಲಿ ಎಷ್ಟು ಹಣ ಖರ್ಚು ಮಾಡಲಾಗಿದೆ. ಯಾವ ಯಾವ ಕಾಮಗಾರಿಗೆ ಖರ್ಚು ಮಾಡಲಾಗಿದೆ?

2. ಪೈಪು ದುರಸ್ತಿಗಾಗಿ ಎಷ್ಟು ಖರ್ಚು ಮಾಡಲಾಗಿದೆ, ವಿದ್ಯುತ್ ಸರಬರಾಜು ವ್ಯವಸ್ಥೆ ಸುಧಾರಣೆಗೆ ಎಷ್ಟು ಖರ್ಚು ಮಾಡಲಾಗಿದೆ?

3. ಲಕ್ಷಾಂತರ ರೂ.ಹಣ ಖರ್ಚು ಮಾಡಿದರೂ ನೀರು ಸೋರಿಕೆ ನಿಂತಿಲ್ಲ, ನಗರ ಪ್ರದೇಶದಲ್ಲಿ ವಾರಕ್ಕೊಮ್ಮೆಯೂ ನೀರು ಪೂರೈಸದೆ ಇರುವ ವಿಚಾರ ನಿಜವೇ?

4. ಅವಳಿ ನಗರಕ್ಕೆ ನೀರು ಸರಬರಾಜು ಸಮಸ್ಯೆ ಪರಿಹಾರಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

5. ಎಲ್ ಅಂಡ್ ಟಿ ಸಂಸ್ಥೆಗೆ ಈ ಕಾಮಗಾರಿಯ ಜಾರಿಗಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ?

6. ಶಾಶ್ವತ ನೀರು ಸರಬರಾಜು ಯೋಜನೆಗೆ ಹುಡ್ಕೋ ಯೋಜನೆಯಿಂದ ಬಿಡುಗಡೆ ಮಾಡಬೇಕಾದ ಶೇ.80ರಷ್ಟು ಹಣ ಬಿಡುಗಡೆ ಮಾಡದೇ ಇರಲು ಸರ್ಕಾರ ಗ್ಯಾರಂಟಿ ನೀಡದೇ ಇರುವುದರಿಂದ ವಿಳಂಬವಾಗಿದೆ ಎಂಬುದು ನಿಜವೇ?

ಉತ್ತರಿಸುವ ಸಚಿವರು: ಶ್ರೀ ಎಸ್.ಎಂ.ಕೃಷ್ಣ(ಮುಖ್ಯಮಂತ್ರಿಯವರು)

ಉತ್ತರ

1. ಹುಬ್ಬಳ್ಳಿ-ಧಾರವಾಡ ಅವಳಿ ನಗರಕ್ಕೆ ನೀರ ಸಾಗರ ಹಾಗೂ ಮಲಪ್ರಭಾ